ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಆ/90/2023-24

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ, ಶೇಷಾದ್ರಿ ರಸ್ತೆ,
ಬೆಂಗಳೂರು, ದಿನಾಂಕ:30.12.2023

ಇವರಿಗೆ,

ಎಲ್ಲಾ ಸರ್ಕಾರಿ ಕಾಲೇಜುಗಳ
ಪ್ರಾಂಶುಪಾಲರುಗಳಿಗೆ

ಮಾನ್ಯರೆ,

ವಿಷಯ: ಅತಿಥಿ ಉಪನ್ಯಾಸಕರು ತರಗತಿಗಳನ್ನು ತೆಗೆದುಕೊಳ್ಳುತ್ತಿರುವ ಕುರಿತು ಮಾಹಿತಿಯನ್ನು ಸಲ್ಲಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿಯ ಇದೇ ಸಮಸಂಖ್ಯೆ ಸುತ್ತೋಲೆ ದಿ:06.10.2023 ಮತ್ತು 02.11.2023.

* * * * * * *

2023-24ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಕಾಲೇಜುಗಳಲ್ಲಿ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕನುಗುಣವಾಗಿ ಅತಿಥಿ ಉಪನ್ಯಾಸಕರನ್ನು ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಮೂಲಕ ಆಯ್ಕೆ ಮಾಡಿಕೊಳ್ಳಲಾಗಿದೆ. ಅತಿಥಿ ಉಪನ್ಯಾಸಕರು ದಿನಾಂಕ:23.11.2023 ರಿಂದ ತರಗತಿಗಳನ್ನು ಬಹಿಷ್ಕರಿಸಿ ಮುಷ್ಕರ ಆರಂಭಿಸಿದ್ದ ಹಿನ್ನೆಲೆಯಲ್ಲಿ ಮಾನ್ಯ ಉನ್ನತ ಶಿಕ್ಷಣ ಸಚಿವರು ದಿನಾಂಕ:29.12.2023 ರಂದು ಅತಿಥಿ ಉಪನ್ಯಾಸಕರ ಸಂಘಟನೆಗಳ ಪದಾಧಿಕಾರಿಗಳೊಂದಿಗೆ ನಡೆಸಿದ ಸಭೆಯಲ್ಲಿ ದಿನಾಂಕ:01.01.2024 ರಿಂದ ತರಗತಿಗಳಿಗೆ ಹಾಜರಾಗಲು ನಿರ್ದೇಶನ ನೀಡಿರುತ್ತಾರೆ. ಅಲ್ಲದೆ, ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ತರಗತಿಗಳನ್ನು ಪ್ರಾರಂಭಿಸುವ ನಿಟ್ಟಿನಲ್ಲಿ ಅತಿಥಿ ಉಪನ್ಯಾಸಕರು ತರಗತಿಗಳನ್ನು ತೆಗೆದುಕೊಳ್ಳದೆ ಇದ್ದಲ್ಲಿ ಪರ್ಯಾಯ ವ್ಯವಸ್ಥೆಯನ್ನು ಸಹ ಕಲ್ಪಿಸಬೇಕಾಗಿರುತ್ತದೆ.

ಆದ್ದರಿಂದ, ಸರ್ಕಾರಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರುಗಳು ದಿನಾಂಕ:01.01.2024 ರಂದು ತರಗತಿಗಳಿಗೆ ಹಾಜರಾಗಿರುವ ಬಗ್ಗೆ ವಿವರಗಳನ್ನು ಅಂದೇ ಅಪರಾಹ್ನ 2:00 ಗಂಟೆಯೊಳಗಾಗಿ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಳವಡಿಸಿರುವ Google Form ನಲ್ಲಿ ನಮೂದಿಸುವಂತೆ ಸೂಚಿಸಲಾಗಿದೆ.

(ಮಾನ್ಯ ಆಯುಕ್ತರ ಆದೇಶದ ಮೇರೆಗೆ)

ತಮ್ಮ ವಿಶ್ವಾಸಿ,

30/12/23

ಮುಖ್ಯ ಆಡಳಿತಾಧಿಕಾರಿ
ಕಾಲೇಜು ಶಿಕ್ಷಣ ಇಲಾಖೆ

ಪ್ರತಿಯನ್ನು:

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ ಮತ್ತು ಕಲಬುರಗಿ – ತಮ್ಮ ವ್ಯಾಪ್ತಿಯ ಕಾಲೇಜುಗಳಲ್ಲಿನ ಮಾಹಿತಿಯನ್ನು upload ಮಾಡಿರುವ ಬಗ್ಗೆ ವೈಯಕ್ತಿಕ ಗಮನಹರಿಸಿ ಮೇಲ್ವಿಚಾರಣೆ ಮಾಡಲು ಸೂಚಿಸಿದೆ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿ, ಕೇಂದ್ರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಣೆಗಾಗಿ
3. ಕಛೇರಿ ಪ್ರತಿ.

C:\Users\dce56\Downloads\Guest Faculty Letter to Principals.docx